# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 148 (279)
ಮಾನ್ಯ ಸದಸ್ಯರ ಹೆಸರು : ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 09.12.2025
ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರ ಉದ್ದೇಶಿತ ಹೈಟೆಕ್ ಡಿಫೆನ್ಸ್ ಮತ್ತು ಏರೋ ಸ್ಪೇಸ್ ಪಾರ್ಕ್ ನಿರ್ಮಾಣಕ್ಕಾಗಿ ದೇವನಹಳ್ಳಿ ಬಳಿ ರೈತರ ಭೂಮಿ ಸ್ವಾಧೀನ ಪ್ರಕ್ರಿಯೆಯನ್ನು ಪ್ರಾರಂಭಿಸುವ ಆಂಧ್ರಪ್ರದೇಶ ಸರ್ಕಾರ ಏರೋ ಸ್ಪೇಸ್ ಉದ್ಯಮಿಗಳನ್ನು ಸ್ವಾಗತಿಸಿರುವ ಬಗ್ಗೆ ಸರ್ಕಾರದ ನಿಲುವೇನು; | ಹೈಟೆಕ್ ಡಿಫೆನ್ಸ್ ಮತ್ತು ಏರೋ ಸ್ಪೇಸ್ ಪಾರ್ಕ್ ನಿರ್ಮಾಣಕ್ಕಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ಚನ್ನರಾಯಪಟ್ಟಣ ಹೋಬಳಿ, 13 ಗ್ರಾಮಗಳಲ್ಲಿ ಒಟ್ಟು 1777-02 ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲು ಉದ್ದೇಶಿಸಲಾಗಿತ್ತು.<br><br>ಆದರೆ, ರೈತರು ಭೂಸ್ವಾಧೀನಕ್ಕೆ ಪ್ರಸ್ತಾಪಿಸಿರುವ ಭೂಮಿಯು ಫಲವತ್ತಾದ ವ್ಯವಸಾಯಕ್ಕೆ ಯೋಗ್ಯವಾದ ಭೂಮಿಯಾಗಿರುವುದರಿಂದ ಹಾಗೂ ಆ ಜಮೀನಿನ ಮೇಲೆ ಹೆಚ್ಚು ಅವಲಂಬಿತರಾಗಿರುವುದರಿಂದ, ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಡಲು ಹೋರಾಟ ನಡೆಸಿದ್ದರಿಂದ, ಸದರಿ ಭೂಮಿಯನ್ನು ಭೂಸ್ವಾಧೀನದಿಂದ ಕೈಬಿಡಲು ಹಾಗೂ ಸಂಪೂರ್ಣ ಪ್ರದೇಶವನ್ನು ಹಸಿರು ವಲಯವನ್ನಾಗಿ ಮುಂದುವರೆಸುವ ಸಲುವಾಗಿ "ಶಾಶ್ವತ ವಿಶೇಷ ಕೃಷಿ ವಲಯ" ವೆಂದು ಘೋಷಿಸಲು ದಿನಾಂಕ 04.12.2025 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಅದರಂತೆ ದಿನಾಂಕ: 06.12.2025ರಂದು ಸರ್ಕಾರದ ಆದೇಶ ಹೊರಡಿಸಲಾಗಿದೆ.<br><br>ಮೇಲ್ಕಂಡ ಜಮೀನಿನ ಭೂಸ್ವಾಧೀನ ಪ್ರಕ್ರಿಯೆಗೆ ಯಾವುದೇ ಮೊತ್ತವನ್ನು ಖರ್ಚು ಮಾಡಿರುವುದಿಲ್ಲ.<br><br>ಮುಂದುವರೆದು, ಡಿಫೆನ್ಸ್ ಮತ್ತು ಏರೋಸ್ಪೇಸ್ ಕಂಪನಿಗಳಿಗೆ ತಮ್ಮ ಯೋಜನೆಗಳನ್ನು ಸ್ಥಾಪಿಸಲು ರಾಜ್ಯದಲ್ಲಿ ಜಮೀನು ಹಂಚಿಕೆಗಾಗಿ ಲಭ್ಯವಿರುತ್ತದೆ. |
| ಆ) | ರಾಜ್ಯ ಸರ್ಕಾರ ಉದ್ದೇಶಿತ ಹೈಟೆಕ್ ಡಿಫೆನ್ಸ್ ಮತ್ತು ಏರೋ ಸ್ಪೇಸ್ ಪಾರ್ಕ್ ನಿರ್ಮಾಣಕ್ಕಾಗಿ ರಾಜ್ಯದಲ್ಲಿ ಯಾವ ಜಾಗವನ್ನು ನೀಡಲು ನಿರ್ಧರಿಸಿದೆ; | |
| ಇ) | ರಾಜ್ಯ ಸರ್ಕಾರ ಉದ್ದೇಶಿತ ಹೈಟೆಕ್ ಡಿಫೆನ್ಸ್ ಮತ್ತು ಏರೋ ಸ್ಪೇಸ್ ಪಾರ್ಕ್ ನಿರ್ಮಾಣಕ್ಕಾಗಿ ದೇವನಹಳ್ಳಿ ಬಳಿ ರೈತರ ಭೂಮಿ ಎಷ್ಟು ಎಕರೆ ಜಮೀನನ್ನು ಕೈ ಬಿಡಲಾಗಿದೆ; ಮತ್ತು ಈ ಭೂಸ್ವಾಧೀನ ಪ್ರಕ್ರಿಯೆಗೆ ಸರ್ಕಾರ ಖರ್ಚು ಮಾಡಿದ ಹಣವೆಷ್ಟು? | |

**ಸಂಖ್ಯೆ: ಸಿಐ 602 ಐಎಪಿ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು